# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1382 |
| ಸದಸ್ಯರ ಹೆಸರು | : | ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22.08.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯತ್ ಕಾರ್ಯದರ್ಶಿ ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಖಾಲಿ ಹುದ್ದೆಗಳ ವಿವರ ನೀಡುವುದು; | ರಾಜ್ಯದಲ್ಲಿ 971 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, 556 ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1, 706 ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗಳು ಖಾಲಿ ಇರುತ್ತವೆ. |
| (ಆ) | ಯಾವ ಕಾಲಮಿತಿಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು; | ರಾಜ್ಯದಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 247 ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ದಿನಾಂಕ:16.11.2024, 17.11.2024, 07.12.2024 ಮತ್ತು 08.12.2024 ರಂದು ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ದಿನಾಂಕ:01.01.2025 ರಲ್ಲಿದ್ದಂತೆ ಗ್ರೇಡ್-1 ಕಾರ್ಯದರ್ಶಿ ವೃಂದದ ರಾಜ್ಯ ಮಟ್ಟದ ಕರಡು ಜ್ಯೇಷ್ಠತಾ ಪಟ್ಟಿಯನ್ನು ದಿನಾಂಕ:03.07.2025 ರಂದು ಪ್ರಕಟಿಸಲಾಗಿದ್ದು, ಸ್ವೀಕೃತವಾಗಿರುವ ಆಕ್ಷೇಪಣೆಗಳು ಪರಿಶೀಲನೆಯಲ್ಲಿರುತ್ತವೆ. ರಾಜ್ಯ ಮಟ್ಟದ ಅಂತಿಮ ಜ್ಯೇಷ್ಠತಾ ಪಟ್ಟಿ ಪ್ರಕಟಗೊಂಡ ನಂತರ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಮುಂಬಡ್ತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ.<br><br>ರಾಜ್ಯದಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇದ್ದ 212 ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) 298 ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-2) ಹಾಗೂ 87 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳು ಹಾಗೂ ಕೋಲಾರ ಜಿಲ್ಲೆಯ ತಾಲ್ಲೂಕು ಪಂಚಾಯಿತಿ / ಜಿಲ್ಲಾ ಪಂಚಾಯಿತಿಯ 4 ಪ್ರಥಮ ದರ್ಜೆ ಸಹಾಯಕರು ಮತ್ತು 6 ದ್ವಿತೀಯ ದರ್ಜೆ ಸಹಾಯಕರ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.<br><br>ಆದರೆ ಒಳ ಮೀಸಲಾತಿ ಅನುಷ್ಠಾನದ ಸಲುವಾಗಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ |

| | | |
|---|---|---|
| | | ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಹೊರಡಿಸದಿರಲು ಸರ್ಕಾರದ ದಿನಾಂಕ:25-11-2024 ರ ಸುತ್ತೋಲೆಯಲ್ಲಿ ತಿಳಿಸಲಾಗಿರುವ ಹಿನ್ನೆಲೆಯಲ್ಲಿ ಸದರಿ ಪ್ರಸ್ತಾವನೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದಿಂದ ಹಿಂದಿರುಗಿಸಲಾಗಿರುತ್ತದೆ. ಒಳ ಮೀಸಲಾತಿ ಅನುಷ್ಠಾನದ ಕುರಿತಂತೆ ಸರ್ಕಾರದ ಮುಂದಿನ ಆದೇಶಕ್ಕೆ ಒಳಪಟ್ಟು ಖಾಲಿ ಇರುವ ಕಾರ್ಯದರ್ಶಿ (ಗ್ರೇಡ್-1 ಮತ್ತು 2), ದ್ವಿತೀಯ ದರ್ಜೆ ಲೆಕ್ಕ ಸಹಾಯಕ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಯಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ ಮಾಡಬೇಕಾಗಿರುತ್ತದೆ. |
| (ಇ) | ಪಿ.ಡಿ.ಓ.ಗಳ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ತಯಾರಿಸಲಾಗಿದೆಯೇ; (ಜೇಷ್ಠತಾ ಪಟ್ಟಿ ನೀಡುವುದು) | ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ರಾಜ್ಯ ಮಟ್ಟದ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿನಾಂಕ:31-12-2011 ರಲ್ಲಿದ್ದಂತೆ ದಿನಾಂಕ:21-02-2014 ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಗ್ರಾಅಪ 374 ಗ್ರಾಪಂಕಾ 2013 ರಲ್ಲಿ ಪ್ರಕಟಿಸಲಾಗಿತ್ತು.<br><br>ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ: 4524/2021 ಹಾಗೂ ಸಂಗತ ರಿಟ್ ಅರ್ಜಿಗಳು / ನ್ಯಾಯ ಮಂಡಳಿಯಲ್ಲಿ ದಾಖಲಾಗಿದ್ದ ಮತ್ತಿತರ ಅರ್ಜಿಗಳನ್ನು ಒಗ್ಗೂಡಿಸಿ, ದಿನಾಂಕ:22-06-2023 ರಂದು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ನೀಡಿದ ಆದೇಶದನ್ವಯ ಸರ್ಕಾರದಿಂದ ರೂಪಿಸಲಾಗಿದ್ದ ಸಮಿತಿ ನೀಡಿದ ವರದಿಯನ್ವಾಧರಿಸಿ, ದಿನಾಂಕ:31-12-2011 ರಲ್ಲಿದ್ದಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಕರಡು ಜೇಷ್ಠತಾ ಪಟ್ಟಿಯನ್ನು ದಿನಾಂಕ:13-06-2024 ರ ಅಧಿಸೂಚನೆ ಸಂಖ್ಯೆ: ಗ್ರಾಅಪ 51 ಜಿಪಿಕೆ 2024 ರಲ್ಲಿ ಪ್ರಕಟಿಸಲಾಗಿತ್ತು. ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 4524/2021 ಕ್ಕೆ ಸಂಬಂಧಿಸಿದಂತೆ ದಿನಾಂಕ: 16-07-2024 ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ಮುಂದಿನ ವಿಚಾರಣೆಯವರೆಗೆ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸದಂತೆ ನಿರ್ದೇಶನ ನೀಡಿರುತ್ತದೆ.<br><br>ಮಾನ್ಯ ಉಚ್ಚ ನ್ಯಾಯಾಲಯವು ಮಧ್ಯಂತರ ಆದೇಶವನ್ನು ತೆರವುಗೊಳಿಸಿದ ನಂತರ ಮಾನ್ಯ ನ್ಯಾಯಾಲಯದ ಆದೇಶದಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಕ್ರಮ ವಹಿಸಲಾಗುವುದು. |

<table>
<tr>
<td>(ಈ)</td>
<td>ಮಂಜೂರಾದ ಸಹಾಯಕ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)</td>
<td>ಸಹಾಯಕ ನಿರ್ದೇಶಕ ವೃಂದದಲ್ಲಿ ಮಂಜೂರಾದ ಮತ್ತು ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.<br><br>
ತಾಲ್ಲೂಕು ಪಂಚಾಯತ್ ಕಛೇರಿ
<table>
<tr><th>ಕ್ರ.ಸಂ.</th><th>ಹುದ್ದೆ</th><th>ಮಂಜೂರು</th><th>ಖಾಲಿ</th></tr>
<tr><td>01</td><td>ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ)</td><td>233</td><td>146</td></tr>
<tr><td>02</td><td>ಸಹಾಯಕ ನಿರ್ದೇಶಕರು (ಪಂಚಾಯತ್ ರಾಜ್)</td><td>226</td><td>187</td></tr>
<tr><td>03</td><td>ಸಹಾಯಕ ನಿರ್ದೇಶಕ</td><td>5</td><td>5</td></tr>
</table>
ಜಿಲ್ಲಾ ಪಂಚಾಯತ್ ಕಛೇರಿ
<table>
<tr><td>04</td><td>ಸಹಾಯಕ ನಿರ್ದೇಶಕ (ಆಡಳಿತ)</td><td>31</td><td>9</td></tr>
</table>
</td>
</tr>
</table>

**ಸಂಖ್ಯೆ:** ಗ್ರಾಅಪ 638 ಗ್ರಾಪಂಅ 2025

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.